# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋಲಾರ ಜಿಲ್ಲಾ ಪಂಚಾಯತಿ ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳಾಗಿ ಸೇವೆ ಸಲ್ಲಿಸುತ್ತಿರುವ ಅಧಿಕಾರಿಗಳ ವೇತನ ವೆಚ್ಚಕ್ಕಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕಡತ ಸಂಖ್ಯೆ: ಗ್ರಾಅಪ 237 ಜಿಪಸ 2020

**ಪ್ರಸ್ತಾವನೆ:**

ಕೋಲಾರ ಜಿಲ್ಲಾ ಪಂಚಾಯತಿ ಅಧ್ಯಕ್ಷರು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 75 ಜಿಪಸ 2016(ಭಾ-1) ದಿನಾಂಕ:21.7.2016ರ ಕಂಡಿಕೆ 4ರಲ್ಲಿ ನಿಯೋಜನೆ ಮೂಲಕ ರಾಜ್ಯ/ಕೇಂದ್ರ ಸರ್ಕಾರ ಅಥವಾ ರಾಜ್ಯ/ಸರ್ಕಾರದ ಉದ್ದಿಮೆಗಳು ಅಥವಾ ಸ್ವಾಯತ್ತ ಸಂಸ್ಥೆಗಳಿಂದ ಪಡೆಯುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ ಶ್ರೀ ಎಂ. ಚಂದ್ರಪ್ರಕಾಶ, ಶಾಖಾ ವ್ಯವಸ್ಥಾಪಕರು, ಬೆಂಗಳೂರು ನಗರ ಸಹಕಾರ ಬ್ಯಾಂಕ್ ನಿಯಮಿತ ಇವರನ್ನು ಆಪ್ತ ಕಾರ್ಯದರ್ಶಿಗಳ ಹುದ್ದೆಗೆ ನಿಯೋಜಿಸಿಕೊಂಡಿದ್ದು ಸದರಿ ವೇತನ ವೆಚ್ಚಕ್ಕಾಗಿ ರೂ.13.30ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-101-0-35-32ರಡಿ ಒದಗಿಸುವಂತೆ ಪ್ರಸ್ತಾವಿಸಿರುತ್ತಾರೆ.

ಆಯವ್ಯಯದಲ್ಲಿ ಮಾಹೆಯಾನ ರೂ.60,000-00ಗಳ ಮಿತಿಯೊಳಗೆ ಸಿ, ಡಿ ವೃಂದ ಮತ್ತು ವಾಹನ ಚಾಲಕರ ಸೇವೆಯನ್ನು ಪಡೆಯಲು ಅಂದಾಜಿಸಿದ್ದು ಪ್ರಸ್ತಾವಿತ ಬ್ಯಾಂಕ್ ವ್ಯವಸ್ಥಾಪಕರ ಸೇವೆಯನ್ನ ಜಿಲ್ಲಾ ಪಂಚಾಯತ್ ಅಧ್ಯಕ್ಷರು ಆಪ್ತ ಕಾರ್ಯದರ್ಶಿಯಾಗಿ ಪಡೆದಿರುವುದು ಮಾಹೆಯಾನ ರೂ.1.05ಲಕ್ಷ ವೇತನವನ್ನು ನೀಡಬೇಕಾಗಿದೆ, ರಾಜ್ಯ/ಕೇಂದ್ರ ಸರ್ಕಾರದ ಮತ್ತು ಸ್ವಾಮ್ಯದ ಅಧಿಕಾರಿಗಳಲ್ಲದವರ ಸೇವೆಯನ್ನು ಆಪ್ತ ಕಾರ್ಯದರ್ಶಿಗಳ ಹುದ್ದೆಗೆ ಸೇವೆಯನ್ನು ಪಡೆದಿರುವುದರಿಂದ, ಈಗ ಹೆಚ್ಚಿನ ಅನುದಾನ ನೀಡಬೇಕಾಗುವ ಪರಿಸ್ಥಿತಿ ಬಂದಿದೆ. ಇದೇ ರೀತಿ ಎಲ್ಲಾ ಜಿ.ಪ. ಅಧ್ಯಕ್ಷರು ಆಪ್ತ ಕಾರ್ಯದರ್ಶಿಯಾಗಿ ಸೇವೆಯನ್ನು ಮುಂದೆ Bank Managers, AICTE scale professors, lecturers, ಇತ್ಯಾದಿ ಹುದ್ದೆಗಳಲ್ಲಿರುವ ಅಧಿಕಾರಿಗಳನ್ನು ಪಡೆದರೆ ಆರ್ಥಿಕವಾಗಿ ಸಂಪನ್ಮೂಲಗಳನ್ನು ನೀಡಲು ಸಾಧ್ಯವಿರುವುದಿಲ್ಲ, ಆದುದರಿಂದ, ಇನ್ನು ಮುಂದೆ ಅಧಿಕಾರಿಗಳ ಸೇವೆಯನ್ನು ಪಡೆಯುವ ಮುನ್ನ ಒದಗಿಸಿರುವ ಅನುದಾನ, ಲಭ್ಯತೆ ಬಗ್ಗೆ ಪರಿಶೀಲಿಸಬೇಕಾಗಿದ್ದು ಈ ಬಗ್ಗೆ ಆಡಳಿತ ಇಲಾಖೆ ನಿಯಮಗಳನ್ನು ಪರಿಷ್ಕರಿಸಲು ಕ್ರಮವಹಿಸಬೇಕಾಗುತ್ತದೆ.

ಪ್ರಸ್ತಾವಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಫೆಬ್ರವರಿ 2020ರಿಂದ ಕಾರ್ಯನಿರ್ವಹಿಸುತ್ತಿದ್ದು ಫೆಬ್ರವರಿ 2020ರಿಂದ ಆಗಸ್ಟ್ 2020ರವರೆಗೆ ಮಾಹೆಯಾನ ರೂ.1,05,713.00ರಂತೆ 7 ತಿಂಗಳಿಗೆ ರೂ.7,39,991.00ಗಳಾಗುತ್ತದೆ. ಪೂರ್ಣಾಂಕ ರೂ.7.40ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಿ ನಿರ್ಣಯಿಸಿ, ಸದರಿಯವರನ್ನು 31.8.2020ರೊಳಗೆ ಕರ್ತವ್ಯದಿಂದ ಬಿಡುಗಡೆಗೊಳಿಸುವ ಷರತ್ತಿಗೊಳಪಟ್ಟು ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 222 ವೆಚ್ಚ 6/2020(ಇ) ದಿನಾಂಕ: 27ನೇ ಆಗಸ್ಟ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಫೆಬ್ರುವರಿ 2020ರಿಂದ ಆಗಸ್ಟ್ 2020ರವರೆಗಿನ ವೇತನ ವೆಚ್ಚಕ್ಕಾಗಿ ಮಾತ್ರ ಅಗತ್ಯವಿರುವ ಅನುದಾನ ರೂ.7.40ಲಕ್ಷ (ರೂಪಾಯಿ ಏಳು ಲಕ್ಷದ ನಲವತ್ತು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

ರಾಜ್ಯ/ಕೇಂದ್ರ ಸರ್ಕಾರದ ಮತ್ತು ಸ್ವಾಮ್ಯದ ಅಧಿಕಾರಿಗಳಲ್ಲದವರ ಸೇವೆಯನ್ನು ಆಪ್ತ ಕಾರ್ಯದರ್ಶಿಗಳ ಹುದ್ದೆಗೆ ಸೇವೆಯನ್ನು ಪಡೆದಿರುವುದರಿಂದ ಸದರಿಯವರನ್ನು ದಿನಾಂಕ:31.8.2020ರೊಳಗೆ ಕರ್ತವ್ಯದಿಂದ ಬಿಡುಗಡೆಗೊಳಿಸಿ ಮಾತೃ ಇಲಾಖೆಗೆ ಹಿಂದಿರುಗಿಸುವುದು. ಇನ್ನು ಮುಂದೆ ಇಂತಹ ಪ್ರಕರಣಗಳಿಗೆ ಎಡೆಮಾಡಿಕೊಡತಕ್ಕದಲ್ಲ ಹಾಗೂ ಪ್ರಸ್ತಾವನೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ತಿಳಿಸಿದೆ. ಈ ಬಗ್ಗೆ ಆಡಳಿತ ಇಲಾಖೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳತಕ್ಕದ್ದು ಹಾಗೂ ಸೂಕ್ತ ಮಾರ್ಗಸೂಚಿಯನ್ನು ಹೊರಡಿಸತಕ್ಕದ್ದು.

| ಕ್ರಸಂ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಕೋಲಾರ | 2515-00-101-0-35-324 | 7.40 |
| | ಒಟ್ಟು | | **7.40** |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಕೋಲಾರ
೨. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ಕೋಲಾರ
7. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ